ನಾಗಮಂಗಲ ಕ್ಷೇತ್ರದ ಅಧಿಕಾರಿ ನೌಕರರ ವರ್ಗಾವಣೆ

2045 (2221) - ಶ್ರೀ ಚಲುವರಾಯ ಸ್ವಾಮಿ ಎನ್. (ನಾಗಮಂಗಲ): ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಾಗಮಂಗಲ ಕ್ಷೇತ್ರದಲ್ಲಿ ಬರುವ ಎಲ್ಲಾ ಇಲಾಖೆಯ ಅಧಿಕಾರಿಗಳು ಶಾಲಾ ಶಿಕ್ಷಕರು ಮತ್ತು ನೌಕರರನ್ನು ಆಗಿಂದಾಗ್ಗೆ ವರ್ಗಾವಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ಎಲ್ಲಾ ವರ್ಗಾವಣೆಗಳು ಸರ್ಕಾರದ ಮಾರ್ಗಸೂಚಿಯ ಪ್ರಕಾರವೇ ನಡೆದಿದೆಯೇ;

ಇ) ಈ ರೀತಿಯ ವರ್ಗಾವಣೆಯಿಂದಾಗಿ ಕ್ಷೇತ್ರದ ಆಡಳಿತಾತ್ಮಕ ಹಾಗೂ ಅಭಿವೃದ್ಧಿ ಕಾರ್ಯಗಳಿಗೆ ತೊಡಕು ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದರೆ ಸರ್ಕಾರದ ಕ್ರಮವೇನು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಯವರು):

ಅ) ಮತ್ತು ಆ) ವರ್ಗಾವಣೆಗಳನ್ನು ವರ್ಗಾವಣಾ ಮಾರ್ಗಸೂಚಿಗಳ ಅನುಸಾರವಾಗಿ ಮಾಡಲಾಗಿದೆ.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

ಶಿವಮೊಗ್ಗ ನಗರದಲ್ಲಿ ಮದ್ಯ ಮಾರಾಟ ಕುರಿತು

2046 (2228) - ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ): ಮಾನ್ಯ ಅಬಕಾರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ನಗರದಲ್ಲಿ ಮದ್ಯ ಮಾರಾಟಕ್ಕೆ ಪರವಾನಗಿ ಪಡೆದಿರುವ ಅಂಗಡಿಗಳ ಸಂಖ್ಯೆ ಎಷ್ಟು; ಈ ಅಂಗಡಿಗಳಿಂದ ಸರ್ಕಾರಕ್ಕೆ ವರ್ಷಕ್ಕೆ ಬರುವ ಆದಾಯವೆಷ್ಟು?

ಆ) ಈ ನಗರದಲ್ಲಿ ಸೆಕೆಂಡ್ಸ್ ಮದ್ಯ ಹಾವಳಿ ತುಂಬಾ ಹೆಚ್ಚಾಗಿದ್ದು, ಇದನ್ನು ನಿಯಂತ್ರಿಸಲು ಕೈಗೊಂಡ ಕ್ರಮಗಳೇನು: ಇದನ್ನು ತಡೆಗಟ್ಟದೇ ಇದ್ದಲ್ಲಿ ಸರ್ಕಾರಕ್ಕೆ ನಷ್ಟವಾಗುವುದಿಲ್ಲವೇ?

ಇ) ಈವರೆವಿಗೂ ಇಂತಹ ಎಷ್ಟು ಪ್ರಕರಣಗಳಲ್ಲಿ ಕ್ರಮ ಜರುಗಿಸಲಾಗಿದೆ.

ಶ್ರೀ ಎಂ.ಎಂ. ನಾಣಯ್ಯ (ಅಬಕಾರಿ ರಾಜ್ಯ ಸಚಿವರು):

ಅ) 74 ಸನ್ನದು ಶುಲ್ಕ, ಮತ್ತು ಸೆಸ್ ರೂ. 1,88, 13,050/-

ಆ) ಶಿವಮೊಗ್ಗ ನಗರದಲ್ಲಿ ಅಬಕಾರಿ ದಾಳಿಗಳನ್ನು ಮೇಲಿಂದ ಮೇಲೆ ಮಾಡಲಾಗುತ್ತಿದ್ದು ಅನಧಿಕೃತ ಮದ್ಯವನ್ನು ವಶಪಡಿಸಿಕೊಂಡು ಮೊಕದ್ದಮೆ ದಾಖಲಿಸಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ. ಅಲ್ಲದೆ ಸಂಶಯಾಸ್ಪದ ಸ್ಥಳಗಳ ಮೇಲೆ ವ್ಯಾಪಕ ದಾಳಿ ನಡೆಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಕಾರ್ಯಕಾರಿ ಸಿಬ್ಬಂದಿಗೆ ಕಟ್ಟುನಿಟ್ಟಿನ ಆದೇಶ ನೀಡಲಾಗಿದೆ.

ಇ) ಪ್ರಸ್ತುತ ವರ್ಷದಲ್ಲಿ ಏಪ್ರಿಲ್‌ನಿಂದ ನವೆಂಬರ್‌ವರೆಗೆ ಈ ನಗರದಲ್ಲಿ 152 ಮೊಕದ್ದಮೆಗಳನ್ನು ದಾಖಲಿಸಿಲಾಗಿದೆ ಹಾಗೂ 14,646 ಲೀಟರ್ ಅಕ್ರಮ ಮದ್ಯ ಮತ್ತು ಅಕ್ರಮ ಚಟುವಟಿಕೆಗಳಲ್ಲಿ ತೊಡಗಿದ್ದ 11 ವಾಹನಗಳನ್ನು ವಶಪಡಿಸಿಕೊಂಡು 45 ಆರೋಪಿಗಳನ್ನು ದಸ್ತಗಿರಿ ಮಾಡಲಾಗಿದೆ. ಈ ಸಂಬಂಧ 33.41 ಲಕ್ಷ ರೂ.ಗಳನ್ನು ವಸೂಲು ಮಾಡಲಾಗಿದೆ.